**APRIL 01, 2026**

**AKASHAVANI - DHARWAD**

**PRADESH SAAMACHARA (KANNADA) 07.05 A.M**

**<><><>**

**ಮುಖ್ಯಾಂಶಗಳು**

- **ಇಂದಿನಿಂದ ದೇಶದಾದ್ಯಂತ ಜನಗಣತಿ ಆರಂಭ; ಸಾರ್ವಜನಿಕರು ಸಹಕರಿಸುವಂತೆ ಮನವಿ.**
- **ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ತುಮಕೂರಿನ ಶಿವಕುಮಾರ ಸ್ವಾಮೀಜಿಗಳ 119ನೇ ಜಯಂತಿ ಸಮಾರಂಭದಲ್ಲಿ ಭಾಗಿ.**
- **ರಾಜ್ಯದಲ್ಲಿ ಎಲ್.ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ಅಭಾವವಿಲ್ಲ; ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ –ಸಚಿವ ಕೆ.ಎಚ್. ಮುನಿಯಪ್ಪ**
- **'ಭೂ ಸುರಕ್ಷಾ ಯೋಜನೆ': ಶೇಕಡ ನೂರರ ಷ್ಟ ದಾಖಲೆ ಡಿಜಿಟಲೀಕರಣಗೊಳಿಸುವಲ್ಲಿ ಕಲಬುರಗಿ ರಾಜ್ಯಕ್ಕೆ ಮಾದರಿ.**

**ಈಗ ವಾರ್ತೆಗಳ ವಿವರ**

**ಜನಗಣತಿ ದೇಶದ ಭವಿಷ್ಯ** ರೂಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ. ಆದ್ದರಿಂದ ಇದರಲ್ಲಿ ಪಾಲ್ಗೊಳ್ಳುವ ಮೂಲಕ ಕರ್ನಾಟಕದ ಅಭಿವೃದ್ಧಿಗೆ ಸಹಕರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜನತೆಯಲ್ಲಿ ಮನವಿ ಮಾಡಿದ್ದಾರೆ.

**ಸಾರ್ವಜನಿಕರು ಸ್ವಯಂಪ್ರೇರಿತರಾಗಿ** ಪಾಲ್ಗೊಂಡು, ಮನೆಗೆ ಭೇಟಿ ನೀಡಿದ ಗಣತಿದಾರರಿಗೆ ಮಾಹಿತಿ ನೀಡುವುದರೊಂದಿಗೆ ಜನಗಣತಿ ಕಾರ್ಯವನ್ನು ಯಶಸ್ವಿಗೊಳಿಸುವಂತೆ ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಕೋರಿದ್ದಾರೆ. **ಚಿಕ್ಕಮಗಳೂರು** ಜಿಲ್ಲೆಯಲ್ಲಿ ಒಟ್ಟು 2 ಸಾವಿರದ 528 ಬ್ಲಾಕ್‌ಗಳನ್ನು ಗುರುತಿಸಲಾಗಿದೆ. 2 ಸಾವಿರದ 220 ಗಣತಿದಾರರು ಹಾಗೂ 380 ಮೇಲ್ವಿಚಾರಕರನ್ನು ಗಣತಿ ಕಾರ್ಯಕ್ಕೆ ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎನ್.ಎಂ.ನಾಗರಾಜ್ ಹೇಳಿದ್ದಾರೆ. ಜನಗಣತಿ–2027 ರ ಅಂಗವಾಗಿ ಸಾರ್ವಜನಿಕರು ಸುರಕ್ಷಿತ ವೆಬ್ ಪೋರ್ಟಲ್ ಮೂಲಕ ಸ್ವಯಂ– ಗಣತಿಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು ಜಿಲ್ಲೆಯ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ಜನಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಜಿ ತಿಳಿಸಿದ್ದಾರೆ.

**<><><>**

**ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು** ನಿನ್ನೆ ರಾತ್ರಿ ಬೆಂಗಳೂರಿಗೆ ಆಗಮಿಸಿದ ಸಂದರ್ಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹಾಗೂ ಕೇಂದ್ರ ಜಲಶಕ್ತಿ ಮತ್ತು ರೈಲ್ವೇ ಖಾತೆಯ, ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಬರಮಾಡಿಕೊಂಡರು. ಇಂದು ತುಮಕೂರಿನ ಸಿದ್ಧಗಂಗಾ ಮಠದಲ್ಲಿ ಆಯೋಜಿಸಿರುವ ಪದ್ಮಭೂಷಣ ಡಾಕ್ಟರ್ ಶಿವಕುಮಾರ ಸ್ವಾಮೀಜಿ ಅವರ 119ನೇ ಜನ್ಮ ದಿನಾಚರಣೆ ಹಾಗೂ ಗುರು ವಂದನಾ ಮಹೋತ್ಸವದಲ್ಲಿ ಭಾಗಿಯಾಗಲಿದ್ದಾರೆ.

<><><>

**ರಾಜ್ಯದಲ್ಲಿ ಎಲ್.ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ** ಅಭಾವವಿಲ್ಲ. ಸಮರ್ಪಕವಾಗಿ ವಿತರಿಸಲಾಗುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ತೈಲ ಸಂಸ್ಥೆಗಳಿಗಿಂತ ಖಾಸಗಿ ಸಂಸ್ಥೆಗಳು ಹೆಚ್ಚಿನ ದರ ವಿಧಿಸುತ್ತಿವೆ. ಇದರ ಬಗ್ಗೆ ನಿಗಾ ವಹಿಸುವಂತೆ ಹಾಗೂ ರಾಜ್ಯಕ್ಕೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಪೆಟ್ರೋಲ್ ಹಾಗೂ ಅಡುಗೆ ಅನಿಲ ಸಿಲಿಂಡರ್ ವಿತರಿಸುವಂತೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ರಾಜ್ಯದಲ್ಲಿ ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

<><><>

**ಭೂಮಿಯ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಿ, ಅವುಗಳನ್ನು ಶಾಶ್ವತವಾಗಿ** ರಕ್ಷಿಸುವ ಉದ್ದೇಶವುಳ್ಳ 'ಭೂ ಸುರಕ್ಷಾ ಯೋಜನೆಯಡಿ' ಶೇಕಡ ನೂರರಷ್ಟು ದಾಖಲೆಗಳನ್ನು ಡಿಜಿಟಲೀಕರಣಗೊಳಿಸುವ ಮೂಲಕ ಕಲಬುರಗಿ ಇಡೀ ರಾಜ್ಯಕ್ಕೆ ಮಾದರಿಯಾಗಿ ಹೊರಹೊಮ್ಮಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಸ್ವಾತಂತ್ರ್ಯಪೂರ್ವದ ಹಾಗೂ ಸ್ವಾತಂತ್ರ್ಯಾ ನಂತರದ ಲಭ್ಯವಿರುವ ಎಲ್ಲ ಹಳೆಯ ಭೂ ದಾಖಲೆಗಳನ್ನು ಸ್ಕ್ಯಾನಿಂಗ್ ಮತ್ತು ಡಿಜಿಟಲೀಕರಣ ಪ್ರಕ್ರಿಯೆ ಮೂಲಕ ರಕ್ಷಿಸಲು ಭೂ–ಸುರಕ್ಷಾ ಯೋಜನೆಯನ್ನು ಜಾರಿಗೆ ತರಲಾಗಿದೆ. ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲೂಕಿನಲ್ಲಿ 2024ರ ಫೆಬ್ರವರಿಯಲ್ಲಿ ಪ್ರಾಯೋಗಿಕವಾಗಿ ಆರಂಭವಾದ ಯೋಜನೆಯನ್ನು ಜಿಲ್ಲೆಯ ಉಳಿದ ತಾಲೂಕುಗಳಿಗೂ ವಿಸ್ತರಿಸಲಾಗಿತ್ತು ಎಂದಿದ್ದಾರೆ.

<><><>

**ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘ 2025 –26 ನೇ ಆರ್ಥಿಕ** ವರ್ಷದಲ್ಲಿ 12 ಕೋಟಿ 59 ಲಕ್ಷ ರೂಪಾಯಿ ಲಾಭ ಗಳಿಸಿದ್ದು, 510 ಕೋಟಿ ರೂಪಾಯಿ ವಹಿವಾಟು ನಡೆಸುವುದರ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ ಎಂದು ಕೆ.ಎಮ್.ಎಫ್ ಅಧ್ಯಕ್ಷ ಹಾಗೂ ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಬೆಳಗಾವಿಯಲ್ಲಿ ಮೇಗಾ ಡೈರಿ ನಿರ್ಮಿಸಲು ಈಗಾಗಲೇ ಯೋಜನೆಯೊಂದನ್ನು ರೂಪಿಸಲಾಗಿದೆ. ಪ್ರಸಕ್ತ ವರ್ಷ ಸಂಘದ ವಿಸ್ತರಣೆಗೆ ಒತ್ತು ನೀಡಲಾಗಿದೆ. 100 ನೂತನ ಹಾಲು ಉತ್ಪಾದಕರ ಸಂಘಗಳನ್ನು ನಿರ್ಮಿಸಲಾಗಿದೆ ಎಂದು ತಿಳಿಸಿದರು.

<><><>

**ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನಲ್ಲಿ ಏಪ್ರೀಲ್ 21ರಂದು ಸುಮಾರು** 600 ಕೋಟಿಗೂ ಅಧಿಕ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಶಾಸಕ ಎಚ್.ಎಂ.ಗಣೇಶ ಪ್ರಸಾದ್ ತಿಳಿಸಿದ್ದಾರೆ. ಗುಂಡ್ಲುಪೇಟೆ ಪಟ್ಟಣ ತಾಲೂಕು ಕಚೇರಿ ಸಭಾ ಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪಟ್ಟಣದ ಡಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ವೇದಿಕೆ ಕಾರ್ಯಕ್ರಮ

ನಡೆಸಲು ಸ್ಥಳ ನಿಗದಿಪಡಿಸಲಾಗಿದೆ. ಜಿಲ್ಲಾಡಳಿತದಿಂದ ಕಾರ್ಯಕ್ರಮ ನಡೆಯಲಿದ್ದು, ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿಗಳ ಜೊತೆ ಇನ್ನೊಂದು ಸಭೆ ನಡೆಸಿ ಅಂತಿಮ ಸಿದ್ಧತೆ ಬಗ್ಗೆ ಚರ್ಚಿಸಲಾಗುವುದು ಎಂದರು.

**<><><>**

**ಕರ್ನಾಟಕ** ಮಾಹಿತಿ ಆಯೋಗ ಕಲಬುರಗಿ ಪೀಠದಲ್ಲಿ ಕಳೆದ 5 ತಿಂಗಳಲ್ಲಿ 71 ದಿನ ಕಲಾಪ ನಡೆಸಿ ಸಾವಿರದ 79 ಪ್ರಕರಣಗಳನ್ನು ವಿಲೇವಾರಿ ಮಾಡಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ. ಅರ್ಜಿದಾರರಿಗೆ ಮಾಹಿತಿ ನೀಡಲು ಕಾಲ ಹರಣ ಮಾಡಿ, ಸಮಯ ಮತ್ತು ಆರ್ಥಿಕ ನ ್ಟ ಉಂಟು ಮಾಡಿದ ಹಿನ್ನೆಲೆ, ನೊಂದ ಅರ್ಜಿದಾರರಿಗೆ 34 ಸಾವಿರ ರೂಪಾಯಿ ಪರಿಹಾರ ನೀಡಲು ಆದೇಶಿಸಲಾಗಿದೆ. ಬರುವ ದಿನಗಳಲ್ಲಿ ಹೊಸ ಪ್ರಕರಣಗಳನ್ನು ಕೈಗೆತ್ತಿಕೊಂಡು ವಿಚಾರಣೆ ಶೀಘ್ರದಲ್ಲೇ ಮುಗಿಸಿ ಅರ್ಜಿದಾರರಿಗೆ ಮಾಹಿತಿ ನೀಡಲು ಕ್ರಮ ವಹಿಸುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><><>**

**ಆಕಾಶವಾಣಿ ಧಾರವಾಡ ಕೇಂದ್ರದ, ಸಹಾಯಕ ನಿರ್ದೇಶಕ ಹಾಗೂ ಕಾರ್ಯಕ್ರಮ** ವಿಭಾಗದ ಮುಖ್ಯಸ್ಥ, ಶರಣಬಸವ ಚೋಳಿನ ಅವರು, 35 ವರ್ಷಗಳ ಸುಧೀರ್ಘ ಸೇವೆಯ ಬಳಿಕ, ನಿನ್ನೆ ಸೇವಾ ನಿವೃತ್ತರಾದರು. ಆಕಾಶವಾಣಿ ಧಾರವಾಡ ಕೇಂದ್ರದ, ಕಾರ್ಯಕ್ರಮ ವಿಭಾಗದ ಮುಖ್ಯಸ್ಥರಾಗಿ, ಇಂದು, ಹಿರಿಯ ಕಾರ್ಯಕ್ರಮ ನಿರ್ವಾಹಕಿ, ಮಂಜುಳಾ ಪುರಾಣಿಕ, ಅಧಿಕಾರ ಸ್ವೀಕರಿಸಲಿದ್ದಾರೆ.

**<><><>**

**ಈಗ ಸಂಕ್ಷಿಪ್ತ ಸುದ್ದಿಗಳು**

**ಬೆಂಗಳೂರಿನಲ್ಲಿ ಪ್ರಯಾಣಿಕರೊ**ಬ್ಬರು ರೈಲಿನಲ್ಲಿ ಮರೆತು ಬಿಟ್ಟು ಹೋಗಿದ್ದ 7 ಲಕ್ಷದ 53 ಸಾವಿರ ರೂಪಾಯಿ ಮೌಲ್ಯದ ಆಭರಣ ಮತ್ತು ನಗದನ್ನು ಒಳಗೊಂಡಿದ್ದ ಕೈಚೀಲವನ್ನು ತ್ವರಿತವಾಗಿ ಪತ್ತೆ ಹಚ್ಚಿ ಅದನ್ನು ಅದರ ವಾರಸುದಾರರಿಗೆ ರೈಲ್ವೆ ರಕ್ಷಣಾ ಪಡೆ ಹಿಂದಿರುಗಿಸಿದೆ ಎಂದು ನೈಋತ್ಯ ರೈಲ್ವೆ ಬೆಂಗಳೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ ಕೆ.ಎನ್.ತಿಳಿಸಿದ್ದಾರೆ.

**<><><>**

**ಮತದಾನ ಜಾಗೃತಿ ಅಭಿಯಾನದಡಿ ಬಾಗಲಕೋಟೆಯಲ್ಲಿ** ವಿದ್ಯಾರ್ಥಿಗಳಿಂದ ಭವ್ಯ ಜಾಗೃತಿ ಜಾಥಾ ಹಾಗೂ ಮಾನವ ಸರಪಳಿ ಕಾರ್ಯಕ್ರಮ ನಿನ್ನೆ ಆಯೋಜಿಸಲಾಗಿತ್ತು.

**<><><>**

**ನಿತ್ಯ ವ್ಯವಹಾರ ಹಾಗೂ ಆಡಳಿತ ಭಾ ೆಯಾಗಿ ಕನ್ನಡ ಬಳಸಲು ಆದ್ಯತೆ** ನೀಡಬೇಕು. ಕನ್ನಡ ಭಾ ೆಯ ಅಸ್ಮಿತೆಗಾಗಿ ಕನ್ನಡದ ಅನು ್ಠಾನವನ್ನು ಸರ್ಕಾರ ಮಾಡುತ್ತಿದೆ. ಕನ್ನಡಿಗರು ಮೊದಲು ದಿನನಿತ್ಯ ಮತ್ತು ಸಾರ್ಜನಿಕವಾಗಿ ಕನ್ನಡವನ್ನು ಬಳಸಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾಕ್ಟರ್ ಸಂತೋ ್ ಹಾನಗಲ್ಲ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದ ಕನ್ನಡ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

**<><><>**

ಹಾಸನ ಜಿಲ್ಲೆಯ ಬೇಲೂರಿನ ಐತಿಹಾಸಿಕ ಸುಪ್ರಸಿದ್ಧ ಶ್ರೀ ಚನ್ನಕೇಶವ ಸ್ವಾಮಿ ಬ್ರಹ್ಮರಥೋತ್ಸವ ನಿನ್ನೆ ಅದ್ದೂರಿಯಾಗಿ ಜರುಗಿತು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- ಇಂದಿನಿಂದ ದೇಶದಾದ್ಯಂತ ಜನಗಣತಿ ಆರಂಭ; ಸಾರ್ವಜನಿಕರು ಸಹಕರಿಸುವಂತೆ ಮನವಿ.
- ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ತುಮಕೂರಿನ ಶಿವಕುಮಾರ ಸ್ವಾಮೀಜಿಗಳ 119ನೇ ಜಯಂತಿ ಸಮಾರಂಭದಲ್ಲಿ ಭಾಗಿ.
- ರಾಜ್ಯದಲ್ಲಿ ಎಲ್.ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ಅಭಾವವಿಲ್ಲ; ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ –ಸಚಿವ ಕೆ.ಎಚ್. ಮುನಿಯಪ್ಪ
- 'ಭೂ ಸುರಕ್ಷಾ ಯೋಜನೆ': ಶೇಕಡ ನೂರರ ್ಟ ದಾಖಲೆ ಡಿಜಿಟಲೀಕರಣಗೊಳಿಸುವಲ್ಲಿ ಕಲಬುರಗಿ ರಾಜ್ಯಕ್ಕೆ ಮಾದರಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>